ದಿನಾಂಕ 24-01-2023 ರಂದು ಸಾಕ್ಷಿಯನ್ನು ಕರೆಯಿಸಿ ಪ್ರಮಾಣ ವಚನ ಬೋಧಿಸಲಾಯಿತು.

**ಮುಖ್ಯ ವಿಚಾರಣೆ : ವಾದಿಗಳ ಪರ ಶ್ರೀ ಜೆ.ಬಿ.ಕೆ ವಕೀಲರಿಂದ ಃ**

ನಾನು ನನ್ನ ಮುಖ್ಯ ವಿಚಾರಣೆಯ ಬದಲಾಗಿ ಪ್ರಮಾಣ ಪತ್ರವನ್ನು ಸಲ್ಲಿಸಿದ್ದು, ಅದರಲ್ಲಿರುವ ಸಂಗತಿಗಳನ್ನು ನಾನೇ ವಕೀಲರಿಗೆ ಹೇಳಿ ಬರೆಸಿರುತ್ತೇನೆ. ಅದರಲ್ಲಿರುವ ಸಂಗತಿಗಳು ಸತ್ಯದಿಂದ ಕೂಡಿದ್ದು, ಪ್ರಮಾಣ ಪತ್ರದಲ್ಲಿರುವ ಸಹಿಗಳು ನನ್ನದೇ ಆಗಿರುತ್ತವೆ.

ಗುಡಗುಡಿ ಗ್ರಾಮದ ಸ ನಂಃ 64 ರ ಜಮೀನಿನ ಪಹಣಿ ಪತ್ರಿಕೆ ಹಾಜರುಪಡಿಸಿದ್ದು, ಅದನ್ನು ನಿ.ಪಿ-1 ಎಂದು, ಸ ನಂಃ 64 ರ ಜಮೀನಿನ ಗ್ರಾಮ ನಮೂನೆ-7 ಮತ್ತು 12 ರ ದೃಢೀಕೃತ ನಕಲನ್ನು ಹಾಜರುಪಡಿಸಿದ್ದು, ಅದನ್ನು ನಿ.ಪಿ-2 ಎಂದು, ಸ ನಂಃ 64 ರ ಜಮೀನಿನ 1967-68 ರಿಂದ 1987-88 ನೇ ಸಾಲಿನ ಮೂರು ಕೈ ಬರವಣಿಗೆಯ ಪಹಣಿ ಪತ್ರಿಕೆಗಳ ದೃಢೀಕೃತ ನಕಲನ್ನು ಹಾಜರುಪಡಿಸಿದ್ದು, ಅವುಗಳನ್ನು ನಿ.ಪಿ-3 ರಿಂದ 5 ಎಂದು ಮತ್ತು ಡ ಸಂ 375 ರ ದೃಢೀಕೃತ ನಕಲನ್ನು ಹಾಜರುಪಡಿಸಿದ್ದು, ಅದನ್ನು ನಿ.ಪಿ-6 ಎಂದು ಗುರುತಿಸಲಾಯಿತು

**ಪಾಟೀ ಸವಾಲುಃ 2 ನೇ ಪ್ರತಿವಾದಿಯ ಪರ ಶ್ರೀ ಬಿ.ಎಸ್.ಕೆ ವಕೀಲರಿಂದಃ**

ಶ್ರೀ ಎ.ಹೆಚ್.ಡಿ ವಕೀಲರು ಪಾಟೀ ಸವಾಲಿಗೆ ಸಮಯ ಕೋರಿರುತ್ತಾರೆ. ಸದರಿ ಪ್ರತಿವಾದಿಯು ಪ್ರತಿವಾದ ಪತ್ರ ಸಲ್ಲಿಸಿರುವುದಿಲ್ಲ. ಆದ್ದರಿಂದ ಪಾಟೀ ಸವಾಲು ಇಲ್ಲಾ ಎಂದು ತೆಗೆದುಕೊಳ್ಳಲಾಯಿತು.

**ಪಾಟೀ ಸವಾಲುಃ 4 ಮತ್ತು 5 ನೇ ಪ್ರತಿವಾದಿಗಳ ಪರ ಶ್ರೀ ಎಸ್.ಹೆಚ್.ಎಸ್ ವಕೀಲರಿಂದಃ**

ಸದರಿ ಪ್ರತಿವಾದಿಗಳು ಮತ್ತು ಅವರ ಪರ ವಕೀಲರು ಗೈರು ಹಾಜರು. ಸದರಿ

ಪ್ರತಿವಾದಿಗಳು ಪ್ರತಿವಾದ ಪತ್ರ ಸಲ್ಲಿಸಿರುವುದಿಲ್ಲ. 1 ಮತ್ತು 3 ನೇ ಪ್ರತಿವಾದಿಗಳು ಏಕಪಕ್ಷೀಯವಾಗಿರುತ್ತಾರೆ. ಆದ್ದರಿಂದ ಪಾಟೀ ಸವಾಲು ಇಲ್ಲಾ ಎಂದು ತೆಗೆದುಕೊಳ್ಳ ಲಾಯಿತು.

**(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದ ಮೇರೆಗೆ ಬೆರಳಚ್ಚು ಮಾಡಲಾಯಿತು)**

ಓ. ಹೇ. ಕೆ ಸರಿ ಇದೆ ಎಂದು
ಒಪ್ಪಿರುತ್ತಾರೆ.

**Sd/-**

ದಿವಾಣಿ ನ್ಯಾಯಾಧೀಶರು ಮತ್ತು ಜೆ ಎಂ ಎಫ್ ಸಿ
ಹಾನಗಲ್ಲ.

ಸಾಕ್ಷಿದಾರರ ಸಹಿ